# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** 2018-19ನೇ ಸಾಲಿನ ಗಾಂಧಿಗ್ರಾಮ ಪುರಸ್ಕಾರಕ್ಕೆ ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡುವ ಬಗ್ಗೆ.

**ಓದಲಾಗಿದೆ:** ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 450 ಗ್ರಾಪಂಅ 2016, ದಿನಾಂಕ 23.05.2016

=====

**ಪ್ರಸ್ತಾವನೆ:**

ರಾಜ್ಯದದಲ್ಲಿ ಉತ್ತಮ ಸಾಧನೆ ಮಾಡಿರುವ ಗ್ರಾಮ ಪಂಚಾಯತಿಗಳನ್ನು ಗುರುತಿಸಿ ಪ್ರತಿ ವರ್ಷ ಗಾಂಧಿ ಗ್ರಾಮ ಪುರಸ್ಕಾರ ನೀಡಲಾಗುತ್ತಿದೆ. ಈ ಯೋಜನೆಯನ್ನು 2013-14ರಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ತಾಲ್ಲೂಕಿಗೆ ಒಂದರಂತೆ ಗ್ರಾಮ ಪಂಚಾಯತಿಯನ್ನು ಆಯ್ಕೆ ಮಾಡಿ ರೂ.5.00ಲಕ್ಷಗಳ ಪ್ರಶಸ್ತಿ ಹಣ ನೀಡಿ ಗೌರವಿಸಲಾಗುತ್ತಿದೆ.

ಪಂಚತಂತ್ರ ತಂತ್ರಾಂಶದ ಮೂಲಕ ವಿವಿಧ ಮಾನದಂಡಗಳನ್ನು ನಿಗದಿಪಡಿಸಿ, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗುತ್ತದೆ. ಪಂಚತಂತ್ರ ತಂತ್ರಾಂಶದ ಮೂಲಕ ನಿಗದಿಪಡಿಸಲಾದ ಪ್ರಶ್ನಾವಳಿಗಳಿಗೆ ಉತ್ತರಿಸಿ, ಪ್ರತಿ ತಾಲ್ಲೂಕಿಗೆ ಅತಿ ಹೆಚ್ಚು ಅಂಕಗಳಿಸುವ ಮೂಲಕ ಪುರಸ್ಕಾರಕ್ಕೆ ಅರ್ಹತೆ ಪಡೆದ ಮೂರು ಗ್ರಾಮ ಪಂಚಾಯತಿಗಳ ಸಾಧನೆಯನ್ನು ಜಿಲ್ಲಾ ಪಂಚಾಯತಿಗಳಿಂದ ಪರಿಶೀಲನೆ ಮಾಡಿಸಿ ವರದಿ ಪಡೆಯಲಾಗುತ್ತದೆ. ಈ ರೀತಿ ಸರ್ಕಾರಕ್ಕೆ ಸಲ್ಲಿಕೆಯಾದ ಪ್ರಸ್ತಾವನೆಗಳನ್ನು ರಾಜ್ಯಮಟ್ಟದ ಪರಾಮರ್ಶೆ ಸಮಿತಿಯಲ್ಲಿ ಪರಾಮರ್ಶಿಸುವ ಮೂಲಕ ತಾಲ್ಲೂಕಿಗೆ ಒಂದರಂತೆ ಗ್ರಾಮ ಪಂಚಾಯತಿಯನ್ನು ಪುರಸ್ಕಾರಕ್ಕೆ ಅಂತಿಮಗೊಳಿಸಲಾಗುತ್ತದೆ.

ಅದರಂತೆ ಪ್ರಸ್ತುತ, 2018-19ನೇ ಸಾಲಿಗೆ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಆಯ್ಕೆ ಮಾಡಲು ಮಾನದಂಡಗಳನ್ನು ನಿಗಧಿಪಡಿಸಿ, ಅರ್ಜಿಗಳನ್ನು ಆಹ್ವಾನಿಸಿ, ಪ್ರತಿ ತಾಲ್ಲೂಕಿಗೆ ಒಂದರಂತೆ ಗ್ರಾಮ ಪಂಚಾಯತಿಯನ್ನು ಆಯ್ಕೆಮಾಡಿ ರೂ.5.00ಲಕ್ಷಗಳ ಪ್ರಶಸ್ತಿ ಹಣ ನೀಡಿ ಗೌರವಿಸಲು ಸರ್ಕಾರವು ನಿರ್ಧರಿಸಿದೆ. ಆದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 497 ಗ್ರಾಪಂಅ 2019, ಬೆಂಗಳೂರು, ದಿನಾಂಕ 14-08-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2018-19ನೇ ಸಾಲಿನ ಗಾಂಧಿಗ್ರಾಮ ಪುರಸ್ಕಾರಕ್ಕೆ ಗ್ರಾಮ ಪಂಚಾಯತಿಗಳ ಆಯ್ಕೆ ಪ್ರಕ್ರಿಯೆಯನ್ನು ಈ ಕೆಳಗಿನಂತೆ ನಿಗದಿಪಡಿಸಿ, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

1. ಪಂಚತಂತ್ರ ತಂತ್ರಾಂಶದಲ್ಲಿ 'ಗಾಂಧಿ ಗ್ರಾಮ ಪುರಸ್ಕಾರ ಯೋಜನೆಗಾಗಿ ಅರ್ಜಿ' ಶೀರ್ಷಿಕೆಯಡಿ ಲಭ್ಯಗೊಳಿಸಲಾಗುವ ಪ್ರಶ್ನೆಗಳಿಗೆ ಉತ್ತರಿಸುವ ಮೂಲಕ **ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು ಕಡ್ಡಾಯವಾಗಿ 2018-19ನೇ ಸಾಲಿನ ಗಾಂಧಿಗ್ರಾಮ ಪುರಸ್ಕಾರಕ್ಕೆ ಅರ್ಜಿಗಳನ್ನು ಸಲ್ಲಿಸುವುದು.** (ಅನುಬಂಧ ಲಗತ್ತಿಸಿದೆ. ಒಟ್ಟು 150 ಅಂಕಗಳು)
2. ಪುರಸ್ಕಾರಕ್ಕೆ ಸಲ್ಲಿಸಲಾದ ಅರ್ಜಿಯ ಪ್ರಸ್ತಾವನೆಗೆ ಕಡ್ಡಾಯವಾಗಿ ಗ್ರಾಮ ಪಂಚಾಯತಿ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ದೃಢೀಕರಿಸಿ, ಪರಿಶೀಲನೆ ಸಂದರ್ಭದಲ್ಲಿ ಹಾಜರುಪಡಿಸುವುದು.
3. ಪ್ರತಿ ತಾಲ್ಲೂಕಿನಲ್ಲಿ ಅತಿಹೆಚ್ಚು ಅಂಕ ಪಡೆದ ಮೂರು ಗ್ರಾಮ ಪಂಚಾಯತಿಗಳು ಪುರಸ್ಕಾರಕ್ಕೆ ಅರ್ಹತೆ ಪಡೆಯಲಿವೆ. ಈ ಗ್ರಾಮ ಪಂಚಾಯತಿಗಳ ವಿವರಗಳನ್ನು ಆಯಾ ಜಿಲ್ಲಾ ಪಂಚಾಯತಿಗಳಿಗೆ ಕಳುಹಿಸಿಕೊಡಲಾಗುವುದು. (ಈ ಮೂರು ಗ್ರಾಮ ಪಂಚಾಯತಿಗಳಲ್ಲಿ ಸಮಾನ ಅಂಕಗಳನ್ನು ಪಡೆದಿದ್ದಲ್ಲಿ ಗ್ರಾಮ ಪಂಚಾಯತಿಗಳ ಸಂಖ್ಯೆ ಸಂದರ್ಭಾನುಸಾರ ಹೆಚ್ಚಾಗಬಹುದು)

4. ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿನ ಮಾರ್ಗಸೂಚಿಗಳನ್ನು ಅನುಸರಿಸಿ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ನೇಮಿಸಿ, ಪುರಸ್ಕಾರಕ್ಕೆ ಅರ್ಹತೆ ಪಡೆದಿರುವ ಗ್ರಾಮ ಪಂಚಾಯತಿಗಳು ಉತ್ತರಿಸಿರುವ ಅಂಶಗಳನ್ನಾಧರಿಸಿ ದಾಖಲಾತಿಗಳ ಪರಿಶೀಲನೆ ನಡೆಸುವುದು. ನಂತರ ಜಿಲ್ಲಾ ಪರಿಶೀಲನಾ/ಆಯ್ಕೆ ಸಮಿತಿಯು ಪುರಸ್ಕಾರಕ್ಕೆ ಅರ್ಹತೆ ಪಡೆದ ಗ್ರಾಮ ಪಂಚಾಯತಿಗಳಲ್ಲಿ ಪ್ರತಿ ತಾಲ್ಲೂಕಿಗೆ ಒಂದು ಗ್ರಾಮ ಪಂಚಾಯತಿಯನ್ನು 2018-19ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕಾಗಿ ಆಯ್ಕೆ ಮಾಡುವುದು.
5. ಈ ರೀತಿ ಸಲ್ಲಿಕೆಯಾದ ಪ್ರಸ್ತಾವನೆಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಇವರ ನೇತೃತ್ವದ ರಾಜ್ಯ ಮಟ್ಟದ ಪರಾಮರ್ಶೆ ಸಮಿತಿಯಲ್ಲಿ 2018-19ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಗ್ರಾಮ ಪಂಚಾಯತಿಗಳನ್ನು ಅಂತಿಮಗೊಳಿಸಿ, ಪುರಸ್ಕಾರ ಪ್ರದಾನ ಮಾಡಲಾಗುವುದು.

**ಅರ್ಜಿ ಸಲ್ಲಿಸಲು ಗೊತ್ತುಪಡಿಸಲಾದ ವೇಳಾಪಟ್ಟಿ:**

1. ಪಂಚತಂತ್ರ ತಂತ್ರಾಂಶದಲ್ಲಿ 2018-19ನೇ ಸಾಲಿನ **ಗಾಂಧಿ ಗ್ರಾಮ ಪುರಸ್ಕಾರದ ಅರ್ಜಿ ಸಲ್ಲಿಕೆಗೆ ಕಡೆಯ ದಿನಾಂಕ: 31-08-2019 (ಶನಿವಾರ).**
2. ಅರ್ಹತೆ ಪಡೆದ ತಾಲ್ಲೂಕಿಗೆ ಮೂರರಂತೆ ಗ್ರಾಮ ಪಂಚಾಯತಿಗಳ ವಿವರಗಳನ್ನು ಅರ್ಜಿ ಸಲ್ಲಿಸಲು ಇರುವ ಕೊನೆಯ ದಿನಾಂಕದ ನಂತರ ಜಿಲ್ಲಾ ಪಂಚಾಯತಿಗಳಿಗೆ ಕಳುಹಿಸಲಾಗುವುದು.

ಜಿಲ್ಲಾ ಪಂಚಾಯತಿಗಳ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಎಲ್ಲಾ ಗ್ರಾಮ ಪಂಚಾಯತಿಗಳು ತಪ್ಪದೇ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಅರ್ಜಿ ಸಲ್ಲಿಸಲು ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ಹಾಗೂ ಮಾರ್ಗದರ್ಶನಗಳನ್ನು ನೀಡಿ, ಯೋಜನೆಯ ಯಶಸ್ವಿ ಅನುಷ್ಠಾನಕ್ಕೆ ಸಂಪೂರ್ಣ ಸಹಕಾರ ನೀಡುವಂತೆ ಕೋರಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಉಮಾ ಮಹದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3. ಉಪ ನಿರ್ದೇಶಕರು, ರಾಜ್ಯ ಖಜಾನೆ ಗಣಕ ಕೋಶ, ಖನಿಜ ಭವನ, ಬೆಂಗಳೂರು.
4. ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-5. ವಿಧಾನಸೌಧ, ಬೆಂಗಳೂರು.
5. ನಿರ್ದೇಶಕರು (ಪಂ.ರಾಜ್-2), ಗ್ರಾ.ಅ.& ಪಂ.ರಾಜ್ ಇಲಾಖೆ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
7. ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ., ಬೆಂಗಳೂರು- ಪಂಚತಂತ್ರ ತಂತ್ರಾಂಶದಲ್ಲಿ ಪ್ರಶ್ನಾವಳಿಗಳನ್ನು ಅಳವಡಿಸಲು ಅಗತ್ಯ ಕ್ರಮಕ್ಕಾಗಿ.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
9. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು.
10. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು (ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ).
11. ಕರ್ನಾಟಕ ವಿಕಾಸ -ಪ್ರಕಟಣೆಗಾಗಿ.
12. ಗಣಕ ಕೋಶ- ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಹಾಗೂ ಪಂಚತಂತ್ರ ತಂತ್ರಾಂಶದಲ್ಲಿ ಪ್ರಶ್ನಾವಳಿಗಳನ್ನು ಅಳವಡಿಸಲು ಎನ್.ಐ.ಸಿ. ಮೂಲಕ ಕ್ರಮವಹಿಸುವುದು.
13. ಶಾಖಾ ರಕ್ಷಾಕಡತಕ್ಕೆ / ಹೆಚ್ಚುವರಿ ಪ್ರತಿ